ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಕೌಶಲ್ಯಾಭಿವೃದ್ಧಿ ಯೋಜನೆಗಳ ಬಗ್ಗೆ

ಡಾ|| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

150 (176) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೌಶಲ್ಯಾಭಿವೃದ್ಧಿ ಇಲಾಖೆಯು ಜಾರಿಗೊಳಿಸುತ್ತಿರುವ ಯೋಜನೆ/ಕಾರ್ಯಕ್ರಮಗಳು ಯಾವುವು; ಫಲಾಪೇಕ್ಷಿಗಳ ಆಯ್ಕೆಗೆ ಅನುಸರಿಸುತ್ತಿರುವ ಮಾನದಂಡಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆ/ಕಾರ್ಯಕ್ರಮಗಳಿಂದ ಉದ್ಯೋಗ ಸೃಷ್ಟಿಗೆ ಅವಕಾಶ ಒದಗಿಸಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಇಲಾಖಾ ವತಿಯಿಂದ ಕೈಗೊಂಡಿರುವ ಯೋಜನೆ/ಕಾರ್ಯಕ್ರಮಗಳು ಯಾವುವು; ಬಿಡುಗಡೆಯಾದ ಮತ್ತು ಬಳಕೆ ಮಾಡಲಾದ ಅನುದಾನ ಎಷ್ಟು; (ಯೋಜನಾ/ಕಾರ್ಯಕ್ರಮವಾರು ವಿವರ ನೀಡುವುದು)

(ಈ) ಈ ಯೋಜನೆ/ಕಾರ್ಯಕ್ರಮಗಳನ್ನು ಸದುಪಯೋಗಪಡಿಸಿಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರಗಳನ್ನು ನೀಡುವುದು)

(ಉ) ಇಂತಹ ಕಾರ್ಮಿಕರಿಗೆ ಸರ್ಕಾರದ ವತಿಯಿಂದ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳನ್ನು ನೀಡುವುದು ; (ಕಟ್ಟಡ ಕಾರ್ಮಿಕರನ್ನು ಒಳಗೊಂಡಂತೆ)

(ಊ) ಕಳೆದ 3 ವರ್ಷಗಳಲ್ಲಿ ಇಲಾಖೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; ಇದನ್ನು ಯಾವ ಯಾವ ಉದ್ದೇಶಗಳಿಗೆ ಬಳಕೆ ಮಾಡಲಾಗಿದೆ ? (ಉದ್ದೇಶವಾರು ವಿವರ ನೀಡುವುದು)